Phone: 08282-257424
E-Mail: kuhrmsection@gmail.com

Fax: 08282-256262
Website: www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

## ವಿಶ್ವವಿದ್ಯಾಲಯ ಕಾರ್ಯಾಲಯ, ಜ್ಞಾನ ಸಹ್ಯಾದ್ರಿ ಶಂಕರಘಟ್ಟ – 577 451

## ಮಾನವ ಸಂಪನ್ಮೂಲ ಮತ್ತು ನಿರ್ವಹಣೆ ವಿಭಾಗ

ಸಂಖ್ಯೆ: ಕುವಿ: ಮಾಸನಿ-7/ 7711 /2020-21 ದಿನಾಂಕ:25-04-2020

### ಸುತ್ತೋಲೆ

ವಿಷಯ: ಕಛೇರಿ ಕೆಲಸಕ್ಕೆ ಹಾಜರಾಗುವ ಕುರಿತು.

ಉಲ್ಲೇಖ:
1. ವಿಶ್ವವಿದ್ಯಾಲಯದ ಸುತ್ತೋಲೆ ಸಂಖ್ಯೆ:ಕುವಿ:ಮಾಸನಿ-7:7693:2019-20 ದಿನಾಂಕ:23-03-2020.
2. ವಿಶ್ವವಿದ್ಯಾಲಯದ ಸುತ್ತೋಲೆ ಸಂಖ್ಯೆ:ಕುವಿ:ಮಾಸನಿ-7:7706:2019-20 ದಿನಾಂಕ:30-03-2020.
3. ವಿಶ್ವವಿದ್ಯಾಲಯದ ಸುತ್ತೋಲೆ ಸಂಖ್ಯೆ:ಕುವಿ:ಮಾಸನಿ-7:7709:2020-21 ದಿನಾಂಕ:14-04-2020
4. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:24-04-2020

****

ದೇಶಾದ್ಯಂತ ಹರಡುತ್ತಿರುವ ಕೋವಿಡ್-19 ನಿಯಂತ್ರಿಸುವ ಸಲುವಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಆದೇಶದ ಮೇರೆಗೆ ವಿಶ್ವವಿದ್ಯಾಲಯದ ಉಲ್ಲೇಖಿತ ಸುತ್ತೋಲೆಗಳಲ್ಲಿ **ದಿನಾಂಕ:03-05-2020** ರವರೆಗೆ ರಜೆಯನ್ನು ಘೋಷಿಸಲಾಗಿತ್ತು. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಹಾಗೂ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಕಾರ್ಯಕಾರಿ ಸಮಿತಿ ಅಧ್ಯಕ್ಷರು ಇವರ ಆದೇಶದ ಮೇರೆಗೆ **ದಿನಾಂಕ:27-04-2020** ರಿಂದ ವಿಶ್ವವಿದ್ಯಾಲಯದ ವಿವಿಧ ಕಛೇರಿಗಳ/ಸ್ನಾತಕೋತ್ತರ ಕೇಂದಗಳ/ಕಾಲೇಜುಗಳ ಹಾಗೂ ಸ್ನಾತಕೋತ್ತರ ಅಧ್ಯಯನ ವಿಭಾಗಗಳಲ್ಲಿನ ಎಲ್ಲಾ ಗ್ರೂಪ್-ಎ, ಗ್ರೂಪ್-ಬಿ ವೃಂದದ ಅಧಿಕಾರಿಗಳು, ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು, ಘಟಕ/ನೇರ ಆಡಳಿತ ಕಾಲೇಜುಗಳ ಪ್ರಾಂಶುಪಾಲರುಗಳು ಕರ್ತವ್ಯಕ್ಕೆ ಹಾಜರಾಗುವಂತೆ ಸೂಚಿಸಲಾಗಿದೆ.

ಮುಂದುವರೆದಂತೆ, ಆಯಾ ಕಛೇರಿ / ವಿಭಾಗ / ಕಾಲೇಜುಗಳ ಅಗತ್ಯಕತೆಗನುಗುಣವಾಗಿ ಗ್ರೂಪ್-ಸಿ ಮತ್ತು ಗ್ರೂಪ್-ಡಿ ವೃಂದಗಳ ಶೇಕಡ 33 ರಷ್ಟು ಸಿಬ್ಬಂದಿಗಳು ಕರ್ತವ್ಯಕ್ಕೆ ಹಾಜರಾಗಲು ಸೂಚನೆಗಳನ್ನು ತಮ್ಮ ಹಂತದಲ್ಲಿಯೇ ನೀಡಲು ಮತ್ತು ಕಛೇರಿ ಕಾರ್ಯ ನಿರ್ವಹಿಸಿದ ಸಿಬ್ಬಂದಿಗಳ ಹಾಜರಾತಿಯ ಮಾಹಿತಿಯನ್ನು **ದಿನಾಂಕ:03-05-2020ರೊಳಗೆ** ಕುಲಸಚಿವರ ಕಛೇರಿಗೆ ಕಳುಹಿಸುವಂತೆ ತಿಳಿಸಲಾಗಿದೆ. ಹಾಗೂ ಕೋವಿಡ್-19 ಸಾಂಕ್ರಾಮಿಕ ರೋಗ ಹರಡದಿರುವಂತೆ ರಾಜ್ಯ ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಅನುಸರಿಸುವುದರೊಂದಿಗೆ ಕಛೇರಿಯಲ್ಲಿ ಕಾರ್ಯ ನಿರ್ವಹಿಸುವಾಗ ಮಾಸ್ಕ್ ಧರಿಸುವಿಕೆ, ಸ್ಯಾನಿಟೈಸರ್ ಬಳಸುವುದು ಹಾಗೂ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವುದು ಕಡ್ಡಾಯವಾಗಿರುತ್ತದೆ.

ಕುಲಸಚಿವ
ಕುಲಸಚಿವ
ಕುವೆಂಪು ವಿಶ್ವವಿದ್ಯಾಲಯ,
ಜ್ಞಾನಸಹ್ಯಾದ್ರಿ, ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ, ಕರ್ನಾಟಕ.

ಗೆ,

1. ಕುಲಸಚಿವರು(ಪರೀಕ್ಷಾಂಗ), ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
2. ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
3. ಗ್ರಂಥಪಾಲಕರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
4. ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಮುಖ್ಯಸ್ಥರುಗಳಿಗೆ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ/ಶಿವಮೊಗ್ಗ/ಕಡೂರು/ಚಿಕ್ಕಮಗಳೂರು.
5. ಸಹ್ಯಾದ್ರಿ ವಿಜ್ಞಾನ / ಸಹ್ಯಾದ್ರಿ ಕಲಾ/ ಸಹ್ಯಾದ್ರಿ ವಾಣಿಜ್ಯ ಮತ್ತು ನಿರ್ವಹಣೆ/ಎಸ್.ಎಂ.ಆರ್ ಕಾಲೇಜುಗಳ ಪ್ರಾಚಾರ್ಯರುಗಳಿಗೆ, ಶಿವಮೊಗ್ಗ/ಶಂಕರಘಟ್ಟ
6. ನಿರ್ದೇಶಕರು – ಎಸ್ಟೇಟ್ /ಪ್ರಸಾರಾಂಗ / ವಿದ್ಯಾರ್ಥಿ ಕ್ಷೇಮಪಾಲನೆ / ದೂರ ಶಿಕ್ಷಣ ನಿರ್ದೇಶನಾಲಯ/ ವಯಸ್ಕರ ಮುಂದುವರೆದ ಶಿಕ್ಷಣ/ ವಿಸ್ತರಣೆ ಮತ್ತು ಕ್ಷೇತ್ರ ಸಂಪರ್ಕ ವಿಭಾಗ/ ಕಾಲೇಜು ಅಭಿವೃದ್ಧಿ ಪರಿಷತ್ತು/ ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಂಡಳಿ /ಅಂಬೇಡ್ಕರ್ ಅಧ್ಯಯನ ಕೇಂದ್ರ, / ಸ್ಥಳೀಯ ಸಂಸ್ಕೃತಿ ಅಧ್ಯಯನ ಕೇಂದ್ರ /ಅಭಿವೃದ್ಧಿ ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
7. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ ಬಿ.ಹೆಚ್.ರಸ್ತೆ, ಕಡೂರು
8. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಐಡಿಎಸ್‌ಜಿ ಕಾಲೇಜು ಆವರಣ, ಚಿಕ್ಕಮಗಳೂರು.
9. ಕಾರ್ಯಪಾಲಕ ಅಭಿಯಂತರರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
10. ಎಲ್ಲಾ ಉಪಕುಲಸಚಿವರಿಗೆ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
11. ಎಲ್ಲಾ ಸಹಾಯಕ ಕುಲಸಚಿವರು / ಅಧೀಕ್ಷಕರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
12. ಸಂಯೋಜನಾಧಿಕಾರಿಗಳು, ಐ.ಕ್ಯೂ.ಎ.ಸಿ. / ಮಹಿಳಾ ಅಧ್ಯಯನ ಕೇಂದ್ರ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
13. ಶಿಕ್ಷಕ ಸಲಹೆಗಾರರು, ಸ್ನಾತಕೋತ್ತರ ಪುರುಷರ:ಮಹಿಳಾ ವಿದ್ಯಾರ್ಥಿಗಳ ನಿಲಯ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
14. ಕಾರ್ಯಕ್ರಮ ಸಂಯೋಜನಾಧಿಕಾರಿಗಳು, ರಾಷ್ಟ್ರೀಯ ಸೇವಾ ಯೋಜನಾ ವಿಭಾಗ, ನಗರ ಕಛೇರಿ ಬೈಪಾಸ್ ರಸ್ತೆ, ಶಿವಮೊಗ್ಗ.
15. ಸಂಚಾಲಕರು, ದೈಹಿಕ ಶಿಕ್ಷಣ ಚಟುವಟಿಕೆ ವಿಭಾಗ, ಎಸ್.ಸಿ/ಎಸ್.ಟಿ. ಸೆಲ್/ ಓ.ಬಿ.ಸಿ. ಅಂಬೇಡ್ಕರ್ ಅಧ್ಯಯನ ಪೀಠ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
16. ಸಂಯೋಜನಾಧಿಕಾರಿಗಳು,ಯುಸಿಸಿಎಫ್ ಮತ್ತು ಐಸಿಟಿ ಕೇಂದ್ರ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
17. ಸಾರ್ವಜನಿಕ ಸಂಪರ್ಕ ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
18. ಆಪ್ತ ಕಾರ್ಯಾಲಯ: ಕುಲಪತಿಗಳು, ಕುಲಸಚಿವರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
19. ವೈದ್ಯಾಧಿಕಾರಿಗಳು, ವಿಶ್ವವಿದ್ಯಾಲಯದ ಆರೋಗ್ಯ ಕೇಂದ್ರ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
20. ಕಛೇರಿ ಪ್ರತಿ.

Scanned with CamScanner